ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉನಿ : ಸುಮಪ : 2018–19 : ದಿನಾಂಕ : 14–09–2018

# ಪತ್ರಿಕಾ ಆಮಂತ್ರಣ

## 1. ಪತ್ರಿಕಾಗೋಷ್ಠಿ:

ಮಂಗಳೂರಿನಲ್ಲಿ ಸೆಪ್ಟೆಂಬರ್ 21, 22 ಮತ್ತು 23 ರಂದು ನಡೆಯಲಿರುವ
ಪ್ರಾದೇಶಿಕ ಭಾಷಾ ಚಲನಚಿತ್ರೋತ್ಸವ ಕುರಿತು:

ನಾಗತಿಹಳ್ಳಿ ಚಂದ್ರಶೇಖರ್
ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷರು.

ಎನ್.ಆರ್. ವಿಶುಕುಮಾರ್,
ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಮತ್ತು
ಸಂಸ್ಕೃತಿ ಇಲಾಖೆ,.

ದಿನಾಂಕ: 15–09–2018, ಶನಿವಾರ, ಸಮಯ: ಬೆಳಿಗ್ಗೆ 11–30 ಗಂಟೆಗೆ
ಸ್ಥಳ: ವಾರ್ತಾ ಭವನ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17,
ಭಗವಾನ್ ಮಹಾವೀರ ರಸ್ತೆ (ಇನ್‌ಫ್ಯಾಂಟ್ರಿ ರಸ್ತೆ), ಬೆಂಗಳೂರು –560 001.

## 2. ಕನ್ನಡ ಮತ್ತು ಸಂಸ್ಕೃತಿ ಇಲಾಖೆವತಿಯಿಂದ "ಮನೆಯಂಗಳದಲ್ಲಿ ಮಾತುಕತೆ ಕಾರ್ಯಕ್ರಮ"

ತಿಂಗಳ ಅತಿಥಿ:

ಬೇಜವಾಡ ವಿಲ್ಸನ್, ಮ್ಯಾಗ್ಸೆಸ್ಸೆ ಪ್ರಶಸ್ತಿ ಪುರಸ್ಕೃತರು

ದಿನಾಂಕ: 15–09–2018, ಶನಿವಾರ, ಸಮಯ: ಸಂಜೆ – 4.00 ಗಂಟೆಗೆ

ಸ್ಥಳ: ನಯನ ಸಭಾಂಗಣ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು

ಸಂಖ್ಯೆ: 987/1088

## ಪತ್ರಿಕಾ ಪ್ರಕಟಣೆ

# “ವಿಶ್ವಕರ್ಮ ಜಯಂತಿ” ಕಾರ್ಯಕ್ರಮ

ಬೆಂಗಳೂರು, ಸೆ. 14 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೆಪ್ಟೆಂಬರ್ 17 ರಂದು ಸಂಜೆ 5.00 ಗಂಟೆಗೆ ಬೆಂಗಳೂರು ರವೀಂದ್ರ ಕಲಾಕ್ಷೇತ್ರದಲ್ಲಿ “ವಿಶ್ವಕರ್ಮ ಜಯಂತಿ” ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಈ ಸಮಾರಂಭವನ್ನು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ಉದ್ಘಾಟಿಸಲಿದ್ದಾರೆ. ಡಾ. ಉದಯ್ ಬಿ. ಗರುಡಾಚಾರ್, ಶಾಸಕರು, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ಇವರು ಅಧ್ಯಕ್ಷತೆ ವಹಿಸಲಿದ್ದಾರೆ. ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರ ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಅನಂತಕುಮಾರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಸಚಿವ ಸಂಪುಟದ ಸದಸ್ಯರು, ಸರ್ಕಾರದ ವಿಧಾನಸಭೆ ಸದಸ್ಯರು ಹಾಗೂ ವಿಧಾನ ಪರಿಷತ್ತಿನ ಸದಸ್ಯರು, ವಿರೋಧ ಪಕ್ಷದ ನಾಯಕರು, ಮಹಾಪೌರರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಲೋಕಸಭಾ ಸದಸ್ಯರು ಹಾಗೂ ರಾಜ್ಯಸಭಾ ಸದಸ್ಯರು ಭಾಗವಹಿಸಲಿದ್ದಾರೆ.

ಅಂದು ಸಂಜೆ 3.00 ಗಂಟೆಗೆ ಶ್ರೀಕಾಳಿಕಾಂಭ ಕಮಠೇಶ್ವರ ದೇವಾಲಯ ನಗರ್ತಪೇಟೆಯಿಂದ ಭಗವಾನ್ ವಿಶ್ವಕರ್ಮ ಪ್ರತಿಮೆಯೊಂದಿಗೆ ರವೀಂದ್ರ ಕಲಾಕ್ಷೇತ್ರದವರೆಗೆ ಜಾನಪದ ಕಲಾತಂಡಗಳ ಮೆರವಣಿಗೆ ಏರ್ಪಡಿಸಲಾಗಿದೆ. ಸಂಜೆ 5.00 ರಿಂದ ರವೀಂದ್ರ ಕಲಾಕ್ಷೇತ್ರದಲ್ಲಿ ಜಯಂತಿ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಪ್ರಕಟಣೆ ತಿಳಿಸಿದೆ.

ಸಂಖ್ಯೆ: 988/1089

# ರಾಜ್ಯ ವಿಧಾನ ಪರಿಷತ್ತಿನ  ಮೂರು ಸ್ಥಾನಗಳಿಗೆ ಉಪ ಚುನಾವಣೆ

ಬೆಂಗಳೂರು, ಸೆ. 14 (ಕರ್ನಾಟಕ ವಾರ್ತೆ)

ರಾಜ್ಯ ವಿಧಾನ ಪರಿಷತ್ತಿನ ಮೂರು ಸ್ಥಾನಗಳಿಗೆ  ಅಕ್ಟೋಬರ್ 3  ರಂದು ಉಪ ಚುನಾವಣೆ ನಡೆಯಲಿದೆ.

ರಾಜ್ಯ ವಿಧಾನ ಪರಿಷತ್ ಸದಸ್ಯರಾಗಿದ್ದ ಡಾ. ಜಿ. ಪರಮೇಶ್ವರ್, ಕೆ.ಎಸ್. ಈಶ್ವರಪ್ಪ ಹಾಗೂ ವಿ. ಸೋಮಣ್ಣ ಅವರ ರಾಜೀನಾಮೆಯಿಂದ ತೆರವಾದ ಹಿನ್ನೆಲೆಯಲ್ಲಿ ಈ ಉಪ ಚುನಾವಣೆ ನಡೆಯುತ್ತಿದೆ.

ಚುನಾವಣೆಗೆ ಸಂಬಂಧಿಸಿದಂತೆ ಇಂದು ಅಧಿಸೂಚನೆ ಹೊರಬಿದ್ದಿದ್ದು ನಾಮಪತ್ರಗಳನ್ನು ಸಲ್ಲಿಸಲು ಕೊನೆಯ ದಿನ ಸೆಪ್ಟೆಂಬರ್ 22.  ನಾಮಪತ್ರಗಳ ಪರಿಶೀಲನೆ ಸೆಪ್ಟೆಂಬರ್ 24.  ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಕೊನೆಯ ದಿನ ಸೆಪ್ಟೆಂಬರ್ 26 ಮತದಾನ ದಿನಾಂಕ (ಅವಶ್ಯಕತೆವಿದ್ದಲ್ಲಿ) ಅಕ್ಟೋಬರ್ 3.  ಮತದಾನದ ಸಮಯ ಬೆಳಿಗ್ಗೆ 9.00 ಗಂಟೆಯಿಂದ ಸಂಜೆ 4.00 ಗಂಟೆವರೆಗೆ ಮತದಾನ ನಡೆಯಲಿದೆ.   ಮತಗಳ ಎಣಿಕೆ  ಅಂದೇ ಸಂಜೆ  5.00 ಗಂಟೆಗೆ ನಡೆಯಲಿದೆ.

ಕರ್ನಾಟಕ ವಿಧಾನಸಭೆಯ ಜಂಟಿ ಕಾರ್ಯದರ್ಶಿಯವರಾದ ಎಂ.ಎಸ್. ಕುಮಾರಸ್ವಾಮಿ ಅವರು ಚುನಾವಣಾಧಿಕಾರಿಯಾಗಿ ಹಾಗೂ ಅಧೀನ ಕಾರ್ಯದರ್ಶಿಯವರಾದ ಬಿ.ಎಸ್. ಮಹಾಲಿಂಗೇಶ್ ಅವರು ಸಹಾಯಕ ಚುನಾವಣಾಧಿಕಾರಿಯಾಗಿರುತ್ತಾರೆ.

ಚುನಾವಣೆಗೆ ಸ್ಪರ್ಧಿಸಲಿಚ್ಚಿಸುವ ಅಭ್ಯರ್ಥಿಗಳು ಸೆಪ್ಟೆಂಬರ್ 14 ರಿಂದ 22  ರವರೆಗೆ ಚುನಾವಣಾಧಿಕಾರಿ ಅಥವಾ ಸಹಾಯಕ ಚುನಾವಣಾಧಿಕಾರಿಯವರ ಕಚೇರಿಯಲ್ಲಿ ಬೆಳಿಗ್ಗೆ 11.00 ಗಂಟೆಯಿಂದ ಮಧ್ಯಾಹ್ನ 3.00 ಗಂಟೆಯವರೆಗೆ ನಾಮಪತ್ರಗಳನ್ನು ಸಲ್ಲಿಬಹುದಾಗಿದೆ. ಸೆಪ್ಟೆಂಬರ್ 16 ರಂದು ಮತ್ತು 21 ರಂದು ಸಾರ್ವತ್ರಿಕ ರಜಾ ದಿನಗಳಾಗಿರುವುದರಿಂದ ಆ ದಿನಗಳಂದು ನಾಮಪತ್ರಗಳನ್ನು ಸ್ವೀಕರಿಸಲಾಗುವುದಿಲ್ಲ.

ಪ್ರತಿಯೊಬ್ಬ ಅಭ್ಯರ್ಥಿಯು ತಮ್ಮ ನಾಮಪತ್ರದ ದಸ್ತಾವೇಜನ್ನು ನಿಗದಿತ ನಮೂನೆ 2ಡಿಯಲ್ಲಿ ಸಲ್ಲಿಸಬೇಕು ಮತ್ತು ಅವರ ಉಮೇದುವಾರಿಕೆಗೆ ಸೂಚಕರಾಗಿ,  ಕನಿಷ್ಟ ಹತ್ತು ಜನ

ವಿಧಾನಸಭಾ ಸದಸ್ಯರು ಸಹಿ ಮಾಡಿರಬೇಕು. ಈ ಸಂಬಂಧದಲ್ಲಿ 1951 ನೇ ಇಸವಿಯ ಪ್ರಜಾಪ್ರಾತಿನಿಧ್ಯ ಅಧಿನಿಯಮದ 34(1)(ಬಿ) ಯೊಂದಿಗೆ ಓದಲಾದ ಪ್ರಕರಣ 39(2) ಕ್ಕೆ ಅಭ್ಯರ್ಥಿಗಳ ಗಮನವನ್ನು ಸೆಳೆಯಲಾಗಿದೆ. ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಾಮಪತ್ರದೊಂದಿಗೆ ಐದು ಸಾವಿರ ರೂ. ಗಳನ್ನು ಹಾಗೂ ಇತರೆಯವರು ಹತ್ತು ಸಾವಿರ ರೂ. ಗಳನ್ನು ಠೇವಣಿಯಾಗಿ ಇಡಬೇಕಾಗುತ್ತದೆ.

ಉಪ ಚುನಾವಣೆಯ ಸಂದರ್ಭದಲ್ಲಿ ಅಕ್ಟೋಬರ್ 3 ರಂದು ಬೆಳಿಗ್ಗೆ 9–00 ಗಂಟೆಯಿಂದ ಸಂಜೆ 4–00 ಗಂಟೆಯವರೆಗೆ ವಿಧಾನ ಸೌಧದ ಕೊಠಡಿ ಸಂಖ್ಯೆ 106 ರಲ್ಲಿ ಇಲ್ಲಿ ನಡೆಸಲಾಗುವುದು.

ಹೆಚ್ಚಿನ ವಿವರಗಳಿಗೆ ಚುನಾವಣಾಧಿಕಾರಿ ಅಥವಾ ಸಹಾಯಕ ಚುನಾವಣಾದಿಕಾರಿಯವರನ್ನು ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ವಿಧಾನಸಭೆಯ ಸಚಿವಾಲಯದ ಪ್ರಕಟಣೆ ತಿಳಿಸಿದೆ.